ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಸದನದಲ್ಲಿ ನೀಡಲಾದ ಉತ್ತರಗಳು (ಅನುಬಂಧ–1)

ಕೆರೆಗಳಿಗೆ ನೀರಿನ ಹಂಚಿಕೆ

909(1249); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಯಬಾಗ ತಾಲ್ಲೂಕಿನ 10 ಗ್ರಾಮಗಳ 16 ಕೆರೆಗಳಿಗೆ ನೀರಿನ ಹಂಚಿಕೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಆ) ಹಾಗಿದ್ದಲ್ಲಿ ಯಾವ ಯಾವ ಪ್ರಮಾಣದಲ್ಲಿ ನೀರಿನ ಹಂಚಿಕೆ ಮಾಡಲಾಗುವುದು;

ಇ) ಯಾವ ಕಾಲಮಿತಿಯೊಳಗೆ ಮಾಡಲಾಗುವುದು?

ಶ್ರೀ M.B. ಪಾಟೀಲ್ (ಜಲ ಸಂಪನ್ಮೂಲ ಸಚಿವರು)

ಅ), ಆ) ಮತ್ತು ಇ) ರಾಯಬಾಗ ತಾಲ್ಲೂಕಿನ 11 ಗ್ರಾಮಗಳ 16 ಕೆರೆಗಳಿಗೆ ಕೃಷ್ಣಾ ನದಿಯಿಂದ ನೀರನ್ನು ತುಂಬಿಸುವ ಬಗ್ಗೆ ಮನವಿ ಬಂದಿದ್ದು, ಮನವಿ ಮನವಿಯು ನಿಗಮದಲ್ಲಿ ಪರಿಶೀಲನೆಯಲ್ಲಿದೆ.

ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿ

910(1250); ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಯಬಾಗ ತಾಲ್ಲೂಕಿನ 10 ಗ್ರಾಮಗಳ 16 ಕೆರೆಗಳಿಗೆ ನೀರನ್ನು ತುಂಬಿಸುವ ಕಾಮಗಾರಿಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಆ) ಈ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರಕ್ಕಿರುವ ತೊಂದರೆಗಳೇನು;

ಇ) ಯಾವಾಗ ಪ್ರಾರಂಭಿಸಲಾಗುವುದು?